ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ಹಿಂದುಳಿದ ವರ್ಗಗಳ ಆಯೋಗದ ವರದಿ ಕುರಿತು

ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :-

966 (1037) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸಂವಿಧಾನದ 74 ಹಾಗೂ 75ನೇ ತಿದ್ದುಪಡಿಯಂತೆ ಪ್ರತಿ ಹತ್ತು ವರ್ಷಕ್ಕೊಮ್ಮೆ ಜಾತಿವಾರು ಸಮೀಕ್ಷೆ ನಡೆಸಿ ಮೀಸಲಾತಿಯ ಪ್ರಮಾಣದ ಪರಿಷ್ಕರಣೆಯಾಗಬೇಕೆಂದು ಸುಪ್ರೀಂ ಕೋರ್ಟಿನ ತೀರ್ಪು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ ; ಬಂದಿದ್ದಲ್ಲಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಆ) ಕಳೆದ 5 ವರ್ಷಗಳಿಂದ ಹಿಂದುಳಿದ ವರ್ಗಗಳ ಆಯೋಗದಿಂದ 2015ರ ಏಪ್ರಿಲ್-ಮೇ ತಿಂಗಳಲ್ಲಿ ಸಮೀಕ್ಷೆ ಪೂರ್ಣಗೊಳಿಸಿದ್ದರೂ ಸಹ ಸಮೀಕ್ಷೆಯ ಅಂಕಿ ಅಂಶಗಳನ್ನು ಬಿಡುಗಡೆ ಮಾಡದಿರಲು ಕಾರಣವೇನು ; ಇದರಿಂದ ಸರ್ಕಾರಕ್ಕೇನಾದರೂ ತೊಂದರೆಯಿದೆಯೇ ; (ವಿವರ ನೀಡುವುದು)

(ಇ) ಜಾತಿವಾರು ಸಮೀಕ್ಷೆ ನಡೆಸಿ, ಅವಕಾಶ ವಂಚಿತ ವರ್ಗಗಳಿಗೆ ಸಾಮಾಜಿಕ ನ್ಯಾಯ ಒದಗಿಸುವುದು ಸರ್ಕಾರದ ಜವಾಬ್ದಾರಿಯಲ್ಲವೆ ; ಹಾಗೂ ಇದು ಒಬಿಸಿ ವರ್ಗಗಳಿಗೆ ಮಾಡಿರುವ ವಂಚನೆಯಲ್ಲವೆ ; ಸರ್ಕಾರ ವಿಳಂಬ ಧೋರಣೆ ಅನುಸರಿಸುತ್ತಿರುವುದಕ್ಕೆ ಕಾರಣವೇನು ;

(ಈ) ಎಷ್ಟು ದಿನಗಳಲ್ಲಿ ಈ ವರದಿಯನ್ನು ಜಾರಿಗೊಳಿಸಿ ಒಬಿಸಿ ವರ್ಗಗಳ ಅವಕಾಶ ವಂಚಿತರಿಗೆ ಸಾಮಾಜಿಕ ನ್ಯಾಯ ಒದಗಿಸಲಾಗುವುದು?